**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಸರ್ಕಾರಿ ವೈದ್ಯರು ಮತ್ತು ಖಾಸಗಿ ವೈದ್ಯಕೀಯ ಸಂಸ್ಥೆಗಳು ತಮ್ಮಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ವೈದ್ಯರು ಮತ್ತು ಸರ್ಕಾರಿ ಅರೆ ವೈದ್ಯಕೀಯ ಸಿಬ್ಬಂದಿಯವರ ಮಾಹಿತಿಯನ್ನು ಆಯಾ ಜಿಲ್ಲಾ ಕೆಪಿಎಂಇ ನೋಂದಣಿ ಮತ್ತು ಕುಂದು ಕೊರತೆ ನಿವಾರಣಾ ಪ್ರಾಧಿಕಾರಕ್ಕೆ ಮತ್ತು ರಾಜ್ಯ ಸರ್ಕಾರಕ್ಕೆ ಒದಗಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:HFW 42 MSA 2025, BENGALURU, DATE:28.01.2026.
2. ಕೆ.ಪಿ.ಎಂ.ಇ ತಿದ್ದುಪಡಿ ಅಧಿನಿಯಮ 2017, ಕಲಂ 18 ರಂತೆ.
3. ಜಿಲ್ಲಾ ಆ.ಕು.ಕ ಅಧಿಕಾರಿಗಳು, ವಿಜಯನಗರ ಜಿಲ್ಲೆ, ಇವರ ಪತ್ರ ಸಂಖ್ಯೆ:ಜಿಆಕುಕ/ವಿ.ನಗರ/ಕೆ.ಪಿ.ಎಂ.ಇ/01/ವಿಚಾರಣೆ/2025-26, ದಿನಾಂಕ:17.03.2026.

***********

ಪ್ರಸ್ತಾವನೆ:

ಕೆ.ಪಿ.ಎಂ.ಇ ತಿದ್ದುಪಡಿ ಕಾಯ್ದೆ 2017 ಕಲಂ 18ರನ್ವಯ ಸರ್ಕಾರಿ ಆಸ್ಪತ್ರೆಗಳಲ್ಲಿ ಸರ್ಕಾರಿ ವೈದ್ಯರು ತಮ್ಮ ಕರ್ತವ್ಯದ ಅವಧಿ ಮುಗಿದ ನಂತರ ಯಾವುದಾದರೂ ಒಂದು ಖಾಸಗಿ ವೈದ್ಯಕೀಯ ಸಂಸ್ಥೆಯಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲು ಅವಕಾಶ ನೀಡಲಾಗಿತ್ತು. ಆದರೆ, ಈ ಕುರಿತು ಸರ್ಕಾರಿ ವೈದ್ಯರುಗಳು ಹಾಗೂ ಖಾಸಗಿ ವೈದ್ಯಕೀಯ ಸಂಸ್ಥೆಗಳು ಸಂಬಂಧಿಸಿದ ಪ್ರಾಧಿಕಾರಕ್ಕೆ ವರದಿ ನೀಡಬೇಕಾಗಿರುತ್ತದೆ.

ಪ್ರಸ್ತುತ ಇದೇ ವಿಷಯಕ್ಕೆ ಸಂಬಂಧಿಸಿದಂತೆ, ವಿಜಯನಗರ ಜಿಲ್ಲೆಯ, ಹೂವಿನಡಗಲಿ ತಾಲೂಕಿನ 8 ಸರ್ಕಾರಿ ವೈದ್ಯರು ಖಾಸಗಿ ವೈದ್ಯಕೀಯ ವೃತ್ತಿ ಮಾಡುತ್ತಿರುವ ಬಗ್ಗೆ ಸರ್ಕಾರಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಮಾಹಿತಿಯನ್ನು ನೀಡಿರುವುದಿಲ್ಲ ಹಾಗೂ ಅದೇ ತಾಲೂಕಿನ 8 ಖಾಸಗಿ ವೈದ್ಯಕೀಯ ಸಂಸ್ಥೆಗಳು ತಮ್ಮಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಂತಹ ಸರ್ಕಾರಿ ವೈದ್ಯರು ಮತ್ತು ಅರೆ ಸರ್ಕಾರಿ ವೈದ್ಯಕೀಯ ಸಿಬ್ಬಂದಿಯವರ ಮಾಹಿತಿಯನ್ನು ಜಿಲ್ಲಾ ಕೆಪಿಎಂಇ ನೋಂದಣಿ ಮತ್ತು ಕುಂದು ಕೊರತೆ ನಿವಾರಣಾ ಪ್ರಾಧಿಕಾರಕ್ಕೆ ಮತ್ತು ರಾಜ್ಯ ಸರ್ಕಾರಕ್ಕೆ ಮಾಹಿತಿ ಒದಗಿಸಿರುವುದಿಲ್ಲ. ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿನ ಕೆ.ಪಿ.ಎಂ.ಇ ತಿದ್ದುಪಡಿ ಕಾಯ್ದೆ 2017 ಕಲಂ 18 ಈ ಕೆಳಕಂಡಂತಿದೆ.

**"18. PRIVATE MEDICAL ESTABLISHMENTS TO REPORT THE NAMES OF GOVERNMENT DOCTORS ON THEIR ESTABLISHMENTS. - EVERY PRIVATE MEDICAL ESTABLISHMENT SHALL REPORT TO THE STATE GOVERNMENT AND THE REGISTRATION AUTHORITY, THE NAMES OF GOVERNMENT DOCTORS AND PARA MEDICAL STAFF, WHOSE SERVICES ARE UTILIZED IN THE PRIVATE MEDICAL ESTABLISHMENT FOR CONSULTATIONS OR ANY OTHER BASIS WHETHER ON PAYMENT BASIS OR NOT. "**

ಈ ಸಂಬಂಧ ಜಿಲ್ಲಾ ಆ.ಕು.ಕ ಅಧಿಕಾರಿಗಳು, ವಿಜಯನಗರ ಜಿಲ್ಲೆ ಇವರು ಈ ಪ್ರಕರಣವನ್ನು ಜಿಲ್ಲಾ ಸಕ್ಷಮ ಪ್ರಾಧಿಕಾರ ಸಮಿತಿ, ಕೆ.ಪಿ.ಎಂ.ಇ ನೋಂದಣಿ ಮತ್ತು ಕುಂದುಕೊರತೆ ನಿವಾರಣಾ ಪ್ರಾಧಿಕಾರ ಸಭೆಯಲ್ಲಿ ಮಂಡಿಸಿ, ವಿಚಾರಣೆ ನಡೆಸಿ, ಸದರಿ ವೈದ್ಯರು ಮತ್ತು ಖಾಸಗಿ ವೈದ್ಯಕೀಯ ಸಂಸ್ಥೆಗಳ ವಿರುದ್ಧ ಕೆಪಿಎಂಇ ತಿದ್ದುಪಡಿ ಅಧಿನಿಯಮ 2017 ಸೆಕ್ಷನ್ 15 ಉಪಬಂಧ 1 ರಂತೆ, ತಲಾ ರೂ.50,000/- ದಂಡ ವಿಧಿಸಿ ಮೇಲೆ ಓದಲಾದ ಕ್ರಮ ಸಂಖ್ಯೆ( 3)ರ ಪತ್ರದಲ್ಲಿ ಕ್ರಮ ಕೈಗೊಂಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ(1) ರಲ್ಲಿ ಸರ್ಕಾರಿ ಆಸ್ಪತ್ರೆಗಳಿಗೆ ಬರುವ ರೋಗಿಗಳ ಹಿತದೃಷ್ಟಿಯಿಂದ ಸರ್ಕಾರಿ ಆಸ್ಪತ್ರೆಗಳ ವೈದ್ಯರು ತಮ್ಮ ಕರ್ತವ್ಯದ ಅವಧಿ ಬಳಿಕ ಖಾಸಗಿ ಆಸ್ಪತ್ರೆಗಳ ಒಳರೋಗಿಗಳಿಗೆ ಚಿಕಿತ್ಸೆ ನೀಡುವುದನ್ನು ಕಡ್ಡಾಯವಾಗಿ ನಿಷೇಧಿಸಿ, ಕೇವಲ ಹೊರರೋಗಿಗಳಿಗೆ ಮಾತ್ರ ಚಿಕಿತ್ಸೆ ನೀಡಬಹುದಾಗಿದೆ ಎಂದು ಆದೇಶಿಸಲಾಗಿದೆ.

ಸದರಿ ಆದೇಶಗಳನ್ನು ಎಲ್ಲಾ ಸರ್ಕಾರಿ ವೈದ್ಯರು ಮತ್ತು ಖಾಸಗಿ ವೈದ್ಯಕೀಯ ಸಂಸ್ಥೆಗಳು ಕಟ್ಟುನಿಟ್ಟಾಗಿ ಪಾಲಿಸಬೇಕಾಗಿರುತ್ತದೆ. ಆದರೆ, ಈ ಕುರಿತು ಇವರುಗಳು ನೀಡಿರುವ ಮಾಹಿತಿ ಒಂದೇ ಕಡೆ ಲಭ್ಯವಾಗದೇ ಇರುವುದರಿಂದ ಈ ವಿಷಯದಲ್ಲಿ ಕೆಲವೊಮ್ಮೆ ಗೊಂದಲ ಉಂಟಾಗಿರುತ್ತದೆ. ಆದ್ದರಿಂದ, ಸದರಿ ಮಾಹಿತಿಯನ್ನು ಆರೋಗ್ಯ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸುವುದು ಅಗತ್ಯವಾಗಿರುತ್ತದೆ. ಆದರೆ, ಈಗಾಗಲೇ ಖಾಸಗಿ ವೈದ್ಯಕೀಯ ವೃತ್ತಿ ಮಾಡುತ್ತಿರುವ ಸರ್ಕಾರಿ ವೈದ್ಯರುಗಳಿಗೆ ಜಾಲತಾಣದಲ್ಲಿ ಪ್ರಕಟಿಸುವ ಕುರಿತು ಸಮಯ ಅವಕಾಶ ನೀಡಬೇಕಾಗಿರುತ್ತದೆ.



prabhavaa.com

ಈ ಎಲ್ಲಾ ಅಂಶವನ್ನು ಪರಿಶೀಲಿಸಲಾಗಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಕುಕ 50 ಹೆಚ್‌ಎಸ್‌ಹೆಚ್2025,**

**ಬೆಂಗಳೂರು, ದಿನಾಂಕ: 27-03-2026.**

ಕೆ.ಪಿ.ಎಂ.ಇ ತಿದ್ದುಪಡಿ ಕಾಯ್ದೆ 2017 ಕಲಂ 18 ರಂತೆ, ರಾಜ್ಯದ ಎಲ್ಲಾ ಖಾಸಗಿ ವೈದ್ಯಕೀಯ ಸಂಸ್ಥೆಗಳು ತಮ್ಮಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ವೈದ್ಯರ ಮತ್ತು ಸರ್ಕಾರಿ ಅರೆ ವೈದ್ಯಕೀಯ ಸಿಬ್ಬಂದಿಯವರ ಮಾಹಿತಿಯನ್ನು ಆಯಾ ಜಿಲ್ಲಾ ಕೆಪಿಎಂಇ ನೋಂದಣಿ ಮತ್ತು ಕುಂದು ಕೊರತೆ ನಿವಾರಣಾ ಪ್ರಾಧಿಕಾರಕ್ಕೆ ಮತ್ತು ರಾಜ್ಯ ಸರ್ಕಾರದ ಪರವಾಗಿ ಆಯುಕ್ತರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರಿಗೆ ಕಡ್ಡಾಯವಾಗಿ ಸಲ್ಲಿಸುವ ಮುಖಾಂತರ ಆರೋಗ್ಯ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಿದ ಕುರಿತು ಖಾತರಿಪಡಿಸಬೇಕಾಗಿರುತ್ತದೆ. ಅಲ್ಲದೇ, ಯಾವುದೇ ಸರ್ಕಾರಿ ವೈದ್ಯರುಗಳು ಅವರ ಸಂಸ್ಥೆಗಳಲ್ಲಿ ಒಳರೋಗಿಗಳಿಗೆ ಚಿಕಿತ್ಸೆಯನ್ನು ನೀಡುತ್ತಿಲ್ಲವೆಂದು ದೃಢಪಡಿಸಬೇಕಾಗಿರುತ್ತದೆ.

ಅದೇ ರೀತಿ ಸರ್ಕಾರಿ ವೈದ್ಯರು ಮತ್ತು ಸರ್ಕಾರಿ ಅರೆ ವೈದ್ಯಕೀಯ ಸಿಬ್ಬಂದಿಯವರು ಖಾಸಗಿ ವೈದ್ಯಕೀಯ ವೃತ್ತಿ ಮಾಡುತ್ತಿರುವ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಹಾಗೂ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರಿಗೆ ಮಾಹಿತಿಯನ್ನು ಕಡ್ಡಾಯವಾಗಿ ಸಲ್ಲಿಸುವ ಮುಖಾಂತರ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಿದ ಕುರಿತು ಖಾತರಿಪಡಿಸಬೇಕಾಗಿರುತ್ತದೆ ಮತ್ತು ಖಾಸಗಿ ವೈದ್ಯಕೀಯ ಸಂಸ್ಥೆಗಳಲ್ಲಿ ಕೇವಲ ಹೊರರೋಗಿಗಳಿಗೆ ಚಿಕಿತ್ಸೆ**(OPD)** ನೀಡುತ್ತಿರುವ ಕುರಿತು ದೃಢಪಡಿಸಬೇಕಾಗಿರುತ್ತದೆ.

ಈ ಆದೇಶವನ್ನು ಜಾರಿಗೊಳಿಸಿದ ದಿನಾಂಕದಿಂದ 60 ದಿನಗಳ ನಂತರ, ಆರೋಗ್ಯ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲಾದ ಸರ್ಕಾರಿ ವೈದ್ಯರು ಮಾತ್ರ ಅವರುಗಳು ಘೋಷಿಸಿದ ಮಾಹಿತಿಯಂತೆ ಖಾಸಗಿ ವೈದ್ಯಕೀಯ ವೃತ್ತಿ ನಡೆಸಬಹುದಾಗಿರುತ್ತದೆ. ಉಳಿದ ಯಾವುದೇ ಸರ್ಕಾರಿ ವೈದ್ಯರು ಮತ್ತು ಸರ್ಕಾರಿ ಅರೆ ವೈದ್ಯಕೀಯ ಸಿಬ್ಬಂದಿಗಳು ಖಾಸಗಿ ವೈದ್ಯಕೀಯ ವೃತ್ತಿಯನ್ನು ನಡೆಸತಕ್ಕದ್ದಲ್ಲ.

ಈ ಆದೇಶವನ್ನು ಉಲ್ಲಂಘಿಸುವ ಖಾಸಗಿ ವೈದ್ಯಕೀಯ ಸಂಸ್ಥೆಗಳ ಹಾಗೂ ಸರ್ಕಾರಿ ವೈದ್ಯರುಗಳ ವಿರುದ್ಧ ಕೆಪಿಎಂಇ ತಿದ್ದುಪಡಿ ಅಧಿನಿಯಮ 2017 ರಂತೆ ಕ್ರಮ ಜರುಗಿಸುವುದು. ಅಲ್ಲದೇ, ಈ ಮೇಲಿನ ಷರತ್ತುಗಳನ್ನು ಉಲ್ಲಂಘಿಸುವ ಸರ್ಕಾರಿ ವೈದ್ಯರ ವಿರುದ್ಧ 'ಕರ್ನಾಟಕ ನಾಗರಿಕ ಸೇವಾ ನಿಯಮ'ಗಳ ಅಡಿಯಲ್ಲಿಯೂ ಸೂಕ್ತ ಶಿಸ್ತು ಕ್ರಮ ಜರುಗಿಸಲಾಗುವುದು. ಮುಂದುವರೆದು, ಈ ಆದೇಶದ ಅನುಪಾಲನೆಯನ್ನು ನೋಡಿಕೊಳ್ಳುವ ಹಾಗೂ ಈ ಆದೇಶವನ್ನು ಉಲ್ಲಂಘಿಸಿದವರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳುವ ಜವಾಬ್ದಾರಿಯು ಆಯಾ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳದ್ದಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

27/3/26

**(ಪ್ರದೀಪ್ ಕುಮಾರ್ ಬಿ ಎಸ್)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಸೇವೆಗಳು-1)

27/03/26

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ & ಇ), ಪಾರ್ಕ್, (ಪಿ.ಬಿ.ನಂ.5329), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಬೆಂಗಳೂರು.
3. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಕೆ.ಪಿ.ಎಂ.ಇ ನೋಂದಣಿ ಮತ್ತು ಕುಂದು ಕೊರತೆ ನಿವಾರಣಾ ಪ್ರಾಧಿಕಾರ.
4. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆರೋಗ್ಯ ಸೌಧ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು (ಮುಂದಿನ ಸೂಕ್ತ ಕ್ರಮಕ್ಕಾಗಿ-ಇಲಾಖಾ ನಿರ್ದೇಶಕರ ಮುಖಾಂತರ)
6. ಎಲ್ಲಾ ಖಾಸಗಿ ವೈದ್ಯಕೀಯ ಸಂಸ್ಥೆಗಳಿಗೆ (ಇಲಾಖಾ ನಿರ್ದೇಶಕರ ಮುಖಾಂತರ)

**ಪ್ರತಿ ಮಾಹಿತಿಗಾಗಿ,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಉಪ ಕಾರ್ಯದರ್ಶಿ-1 ರವರ ಆಪ್ತ ಶಾಖೆ, ಆ.ಕು.ಕ ಇಲಾಖೆ.
2. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

prabhavaa.com